ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 04-03-2021 ಪ್ರಶ್ನೆ ಸಂಖ್ಯೆ : 555 (629)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 04-03-2021

ಉತ್ತರಿಸುವ ಸಚಿವರು: ಮಾನ್ಯ ಜಲ ಸಂಪನ್ಮೂಲ ಸಚಿವರು

ವಿಷಯ : ಭದ್ರಾ ಮೇಲ್ದಂಡೆ ಯೋಜನೆ ಕುರಿತು

(ಅ) ತುಮಕೂರು ಜಿಲ್ಲೆಯ ಮಳೆ ನೆರಳಿನ ಹಾಗೂ ಗಣಿ ಬಾಧಿತ ತಾಲ್ಲೂಕುಗಳಾದ ಗುಬ್ಬಿ, ತಿಪಟೂರು, ಚಿಕ್ಕನಾಯಕನಹಳ್ಳಿ, ಶಿರಾಗಳಿಗೆ ಸಂಪೂರ್ಣ ನೀರಾವರಿ ಕಲ್ಪಿಸುವ ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಯ ಸದ್ಯದ ಸ್ಥಿತಿಗತಿಗಳೇನು; (ಮಾಹಿತಿ ನೀಡುವುದು)

(ಆ) ಭದ್ರಾ ಮೇಲ್ದಂಡೆ ಯೋಜನೆಗೆ ಈವರೆಗೆ ಆದ ಖರ್ಚು ವೆಚ್ಚಗಳೆಷ್ಟು; (ಮಾಹಿತಿ ನೀಡುವುದು)

(ಇ) ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರು ಒದಗಿಸುವ ಎತ್ತಿನಹೊಳೆ ಯೋಜನೆ ಯಾವ ಹಂತದಲ್ಲಿದೆ; (ಮಾಹಿತಿ ನೀಡುವುದು)

(ಈ) ಕಳೆದೆರಡು ವರ್ಷಗಳಿಂದ ಬಯಲುಸೀಮೆಗೆ ನೀರಾವರಿ ಕಲ್ಪಿಸಲು ಸರ್ಕಾರ ವ್ಯಯಿಸಿದ ಹಣವೆಷ್ಟು; (ಮಾಹಿತಿ ನೀಡುವುದು)

(ಉ) ಸಿಂಗಟಾಲೂರು ಹುಲಿಗುಡ್ಡ ಏತ ನೀರಾವರಿ ಯೋಜನೆಯ ಕಾಮಗಾರಿ ಸಮರ್ಪಕವಾಗಿ ನಡೆಯುತ್ತಿದೆಯೇ? (ಮಾಹಿತಿ ನೀಡುವುದು)